# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು (ವಿಧಾನಸಭಾ ಕ್ಷೇತ್ರ)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 962 (1034)

ಉತ್ತರಿಸುವ ಸಚಿವರು : ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

ಉತ್ತರಿಸಬೇಕಾದ ದಿನಾಂಕ : 16-12-2025

*****

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಹೊಸ ಜವಳಿ ನೀತಿ 2025–30 ರಡಿ ಯಾವ ರೀತಿ ಹೂಡಿಕೆಯನ್ನು ಆಕರ್ಷಿಸುತ್ತದೆ ಮತ್ತು ಈ ಕ್ಷೇತ್ರದಲ್ಲಿ ಉದ್ಯೋಗ ಅವಕಾಶಗಳನ್ನು ಸೃಜಿಸಲು ಹೇಗೆ ಅನುವು ಮಾಡಿಕೊಡುತ್ತದೆ; | New Textile and Apparel Policy 2025-30 ನ್ನು ರೂಪಿಸಲು ಕರಡು ಸಿದ್ಧಪಡಿಸಿದ್ದು ಶೀಘ್ರದಲ್ಲಿಯೇ ಜಾರಿಗೊಳಿಸಲಾಗುವುದು.<br><br>ಸದರಿ ಜವಳಿ ನೀತಿಯಲ್ಲಿ ಹೂಡಿಕೆಯನ್ನು ಆಕರ್ಷಿಸಲು ಜವಳಿ ಹಾಗೂ ಸಿದ್ಧಉಡುಪು ಘಟಕಗಳಿಗೆ ಉತ್ತೇಜಿಸಲು New Textile and Apparel Poicy-2025-30 ರಲ್ಲಿ ವಿಶೇಷ ರಿಯಾಯಿತಿ ಮತ್ತು ಪ್ರೋತ್ಸಾಹಗಳನ್ನು ನೀಡಲು ಉದ್ದೇಶಿಸಿದೆ.<br><br>New Textile and Apparel Poicy 2025-30 ರಲ್ಲಿ ಜವಳಿ ಕ್ಷೇತ್ರದಲ್ಲಿ ಉದ್ಯೋಗ ಅವಕಾಶಗಳನ್ನು ಸೃಜಿಸಲು ಸೀವಿಂಗ್ ಮೆಷಿನ್ ಆಪರೇಟರ್ (ಎಸ್.ಎಂ.ಒ), ಕೈಮಗ್ಗ ನೇಯ್ಗೆ ಮತ್ತು ವಿದ್ಯುತ್‌ಮಗ್ಗ ನೇಯ್ಗೆ ವೃತ್ತಿಯಡಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲು ಉದ್ದೇಶಿಸಿದೆ. ತರಬೇತಿ ಪಡೆದ ಅಭ್ಯರ್ಥಿಗಳು, ಕೈಗಾರಿಕೆಗಳಲ್ಲಿ/ ಸ್ವಯಂ ಉದ್ಯೋಗದಲ್ಲಿ ತೊಡಗಿಕೊಳ್ಳುತ್ತಾರೆ ಹಾಗೂ ಹೊಸ ಬಂಡವಾಳ ಹೂಡಿಕೆಯಿಂದ ಉದ್ಯೋಗ ಸೃಜನೆಗೆ ಅವಕಾಶವಿರುತ್ತದೆ. |
| ಆ) | ಈ ಕ್ಷೇತ್ರದಲ್ಲಿ ಬೆಳವಣಿಗೆಯನ್ನು ಉತ್ತೇಜಿಸಲು ಹೊಸ ನೀತಿ ಅಡಿಯಲ್ಲಿ ಯಾವ ನಿರ್ದಿಷ್ಟ ಪ್ರೋತ್ಸಾಹಗಳು ಮತ್ತು ರಿಯಾಯಿತಿಗಳನ್ನು ಹೂಡಿಕೆದಾರರಿಗೆ ನೀಡಲಾಗುವುದು; | New Textile and Apparel Policy 2025–30 ಜಾರಿಗೆ ಬರುವವರೆಗೆ ಹಾಲಿ ಇರುವ ನೂತನ ಜವಳಿ ಹಾಗೂ ಸಿದ್ಧ ಉಡುಪು ನೀತಿ 2019–24 ಚಾಲ್ತಿಯಲ್ಲಿರುತ್ತದೆ. ಸದರಿ ನೀತಿಯಡಿ ಈ ಕೆಳಕಂಡ ರಿಯಾಯಿತಿ ಮತ್ತು ಪ್ರೋತ್ಸಾಹನಗಳನ್ನು ಸಹಾಯಧನವನ್ನು ನೀಡಲಾಗುತ್ತಿದೆ.<br>1. ನೂತನ ಜವಳಿ ಮತ್ತು ಸಿದ್ಧ ಉಡುಪು ನೀತಿ 2019–24 ಯೋಜನೆ:-<br>ಈ ಯೋಜನೆಯಡಿ ಹೊಸದಾಗಿ ಸ್ಥಾಪಿತವಾದ ಜವಳಿ ಆಧಾರಿತ ಕೈಗಾರಿಕೆಗಳಿಗೆ ಈ ಕೆಳಕಂಡಂತೆ ರಿಯಾಯಿತಿ ಮತ್ತು ಪ್ರೋತ್ಸಾಹನಗಳನ್ನು ಒದಗಿಸಲಾಗುವುದು.<br>• ಸಾಲಾಧಾರಿತ ಬಂಡವಾಳ ಸಹಾಯಧನ (10% ರಿಂದ 30% ಸಹಾಯಧನ ಒಟ್ಟು ಬಂಡವಾಳ ಹೂಡಿಕೆಯ ಮೇಲೆ)<br>• ಬಡ್ಡಿ ಸಹಾಯಧನ (ಮಧ್ಯಮ ಹಾಗೂ ಲಾರ್ಜ್ ಜವಳಿ/ ಸಿದ್ಧ ಉಡುಪು ಘಟಕಗಳಿಗೆ ಮೊದಲ 05 ವರ್ಷಗಳಿಗೆ ಅವಧಿ ಸಾಲಗಳ ಮೇಲೆ ವಾರ್ಷಿಕ ಶೇ.5 ರಷ್ಟು ಬಡ್ಡಿ ಸಹಾಯಧನ) |

| | | |
|---|---|---|
| | | • ವಿದ್ಯುತ್‌ಶಕ್ತಿ ಮರುಪಾವತಿ ಸಹಾಯಧನ (ಅತಿ ಸಣ್ಣ ಮತ್ತು ಸಣ್ಣ ಘಟಕಗಳಿಗೆ ಪ್ರತಿ ಯುನಿಟ್‌ಗೆ ರೂ.1/- ರಿಂದ 2/-ರಂತೆ ವಿದ್ಯುತ್ ವೆಚ್ಚದ ಮರುಪಾವತಿ)<br>• ಇ.ಎಸ್.ಐ & ಇ.ಪಿ.ಎಫ್ ಮರುಪಾವತಿ ಸಹಾಯಧನ (ಶೇ.75 ರಷ್ಟು ಮಾಲೀಕರ ವಂತಿಕೆ ಮರುಪಾವತಿ)<br>• ವೇತನ ಸಹಾಯಧನ (ಸಿದ್ಧ ಉಡುಪು ಘಟಕಗಳಿಗೆ ಪ್ರತಿ ಕಾರ್ಮಿಕರಿಗೆ ರೂ.2,000/- ರಿಂದ ರೂ.3,000/- ವೇತನ ಸಹಾಯಧನ<br>• ಶೇ.100 ರಷ್ಟು ಮುದ್ರಾಂಕ ಶುಲ್ಕ ವಿನಾಯಿತಿ & ಪ್ರತಿ ರೂ.1,000/-ಕ್ಕೆ ರೂ.1/-ರ ದರದಲ್ಲಿ ನೋಂದಣಿ ಶುಲ್ಕ ರಿಯಾಯಿತಿ. |
| ಇ) | ಆಧುನಿಕ ಉಡುಪು ಉತ್ಪಾದನೆಯ ಜೊತೆಗೆ ಸಾಂಪ್ರದಾಯಿಕ ಜವಳಿ ಮತ್ತು ಕೈಮಗ್ಗ ವಲಯಗಳಿಗೆ ಬೆಂಬಲ ನೀಡಲು ಸರ್ಕಾರ/ ಇಲಾಖೆ ಯಾವ ರೀತಿ ಕ್ರಮಗಳನ್ನು ಕೈಗೊಂಡಿದೆ; | ಆಧುನಿಕ ಉಡುಪು ಉತ್ಪಾದನೆಯ ಜೊತೆಗೆ ಸಾಂಪ್ರದಾಯಿಕ ಜವಳಿ ಮತ್ತು ಕೈಮಗ್ಗ ವಲಯಗಳಿಗೆ ನೂತನ ಜವಳಿ ನೀತಿಯಲ್ಲಿ ವಿಶೇಷ ಉತ್ತೇಜನ ಮತ್ತು ಪ್ರೋತ್ಸಾಹ ನೀಡಲು ಅವಕಾಶಗಳನ್ನು ಕಲ್ಪಿಸಲಾಗಿದೆ.<br><br>ಆಧುನಿಕ ಉಡುಪು ಉತ್ಪಾದನೆಯ ಜೊತೆಗೆ ಸಾಂಪ್ರದಾಯಿಕ ಜವಳಿ ಮತ್ತು ಕೈಮಗ್ಗ ವಲಯಗಳಿಗೆ ಬೆಂಬಲ ನೀಡಲು ಸರ್ಕಾರವು ಈ ಕೆಳಕಂಡ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುತ್ತಿದೆ.<br><br>**ಕೈಮಗ್ಗ ವಲಯದ ಯೋಜನೆಗಳು:-**<br>• ನೇಕಾರರ ಸಮ್ಮಾನ್ ಯೋಜನೆಯಡಿ ಕೈಮಗ್ಗ ನೇಕಾರರಿಗೆ ವಾರ್ಷಿಕ ರೂ.5,000/- ಗಳ ಆರ್ಥಿಕ ನೆರವು ನೀಡುವುದು.<br>• ಕೈಮಗ್ಗ ವಿಕಾಸ ಯೋಜನೆಯಡಿ ಹೊಸ ಕೈಮಗ್ಗ ಹಾಗೂ ಅಗತ್ಯ ಸಲಕರಣೆಗಳನ್ನು ಖರೀದಿಸಲು ಘಟಕ ವೆಚ್ಚದ ಶೇಕಡ 50 ರಷ್ಟು ಸಹಾಯಧನ ಒದಗಿಸುವುದು.<br>• ಕೈಮಗ್ಗಗಳಿಗೆ ಮೋಟರೈಸ್ಡ್ ಜಕಾರ್ಡ್ ಸಲಕರಣೆಗಳ ಕಿಟ್ ಒದಗಿಸಲು ಪ್ರತಿ ಘಟಕಕ್ಕೆ ವೆಚ್ಚವಾಗುವ ಮೊತ್ತಕ್ಕೆ ಸರ್ಕಾರದ ವತಿಯಿಂದ ಸಾಮಾನ್ಯ ವರ್ಗದವರಿಗೆ ಶೇ.50 ರಷ್ಟು ಸಹಾಯಧನ ಹಾಗೂ ಪರಿಶಿಷ್ಟಜಾತಿ / ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಶೇ.90 ರಷ್ಟು ಸಹಾಯಧನವನ್ನು ಒದಗಿಸುವುದು.<br>• ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘ / ಸಹಕಾರ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೆ ಶೂನ್ಯ ಹಾಗೂ ಶೇ.1 ರ ಬಡ್ಡಿ ದರದಲ್ಲಿ ರೂ.2.00 ಲಕ್ಷಗಳವರೆಗೆ, ಶೇ.3 ರ ಬಡ್ಡಿ ದರದಲ್ಲಿ ರೂ.2.00 ಲಕ್ಷಗಳಿಂದ ರೂ.5.00 ಲಕ್ಷಗಳವರೆಗೆ ಸಾಲ ನೀಡಲಾಗುವುದು.<br>• ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘ / ಸಹಕಾರ ಬ್ಯಾಂಕ್ / ವಾಣಿಜ್ಯ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೆ ಶೇ.8 ರಷ್ಟು ಬಡ್ಡಿ ಸಹಾಯಧನ ನೀಡಲಾಗುವುದು.<br>• ಕೈಮಗ್ಗ ನೇಕಾರರ ಸಹಕಾರ ಸಂಘಗಳು ತಮ್ಮ ಕೈಮಗ್ಗ ಉತ್ಪನ್ನಗಳ ಮಾರಾಟದ ಮೇಲೆ ರಾಜ್ಯ ಸರ್ಕಾರದಿಂದ ಶೇ.20 ರಿಬೇಟ್ ಅನ್ನು ಮರು ಸಂದಾಯ ಪಾವತಿಸಲಾಗುತ್ತಿದೆ. |

- ಕಚ್ಚಾಮಾಲು ಖರೀದಿ ಮೇಲೆ ಕೈಮಗ್ಗ ಸಹಕಾರ ಸಂಘಗಳಿಗೆ ಪ್ರತಿ ಕೆ.ಜಿಗೆ ರೂ.15/- ರ ಸಹಾಯಧನ ನೀಡುವುದು.
- ಮಿತವ್ಯಯ ನಿಧಿ ಯೋಜನೆಯಡಿ ನೇಕಾರರ ಮಜೂರಿಯಿಂದ ಶೇ.8 ನ್ನು ಕಟಾಯಿಸಿ ರಾಜ್ಯ ಸರ್ಕಾರದ ಶೇ.8 ರ ಸಮಚಂದಾ ಸೇರಿಸಿ ಖಜಾನೆಯಲ್ಲಿ ಜಮಾ ಮಾಡಲಾಗುವುದು ಜಮೆಯಾದ ಮೊತ್ತಕ್ಕೆ ಶೇ.12 ರ ಬಡ್ಡಿಯನ್ನು ನೀಡಲಾಗುವುದು.

ಸಾಮಾನ್ಯ ಸೌಲಭ್ಯ ಕೇಂದ್ರ ನಿರ್ಮಾಣಕ್ಕಾಗಿ ಸರ್ಕಾರದಿಂದ ಯೋಜನಾ ವೆಚ್ಚದ ಶೇ.80 ರಷ್ಟು ಅನುದಾನ ನೀಡಲಾಗುವುದು.

- ಕೈಮಗ್ಗ ನೇಕಾರರ ಸಹಕಾರ ಸಂಘಗಳಿಗೆ ಹಿಂದಿನ 3 ವರ್ಷಗಳ ಸರಾಸರಿ ವಹಿವಾಟಿನ ಮೇಲೆ ಶೇ.50 ರಷ್ಟನ್ನು ಅಥವಾ ರೂ.5.00 ಲಕ್ಷಗಳ ಗರಿಷ್ಠ ಮಿತಿಗೆ ಒಳಪಟ್ಟು ಒಂದಾವರ್ತಿ ಪ್ರೋತ್ಸಾಹಧನ ನೀಡಲಾಗುವುದು.
- ಉಣ್ಣೆ ವಲಯ ಪುನಃಶ್ಚೇತನ ಮತ್ತು ಬಲವರ್ಧನೆ ಯೋಜನೆಯಡಿ ಸಹಾಯಧನ
- ರಾಜ್ಯದ ಕೈಮಗ್ಗ ನೇಕಾರರ ಕೈಮಗ್ಗ ಉತ್ಪನ್ನಗಳನ್ನು ಪ್ರೋತ್ಸಾಹಿಸಲು ಹಾಗೂ ಬೆಂಬಲ ನೀಡಲು ರೇಷ್ಮೆ, ಹತ್ತಿ ಮತ್ತು ಉಣ್ಣೆ ಕ್ಷೇತ್ರ / ವಲಯದಲ್ಲಿ ಕೈಮಗ್ಗ ನೇಕಾರರು ಹೊಂದಿರುವ ನೈಪುಣ್ಯತೆ / ಶ್ರೇಷ್ಠತೆ / ತಾಂತ್ರಿಕತೆ / ಉತ್ಕೃಷ್ಟತೆಗಾಗಿ ಕೈಮಗ್ಗ ನೇಕಾರರಿಗೆ ರಾಜ್ಯಮಟ್ಟದ ಪ್ರಶಸ್ತಿ ನೀಡಲಾಗುತ್ತಿದೆ.
- ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೈಮಗ್ಗ ಅಭಿವೃದ್ಧಿ ಕಾರ್ಯಕ್ರಮ (NHDP) ದಡಿ ಕೈಮಗ್ಗ ನೇಕಾರರಿಗೆ ಮುದ್ರಾ ಯೋಜನೆಯಡಿ ಸಾಲ ಸೌಲಭ್ಯ
- ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದಡಿ ನೋಂದಾಯಿತ ನೇಕಾರರಿಗೆ ಕಚ್ಚಾನೂಲನ್ನು ಒದಗಿಸಿ ಅವರು ಉತ್ಪಾಸಿದ ಬಟ್ಟೆಗಳನ್ನು ಸ್ವೀಕರಿಸಿ ಪರಿವರ್ತನಾ ಶುಲ್ಕವನ್ನು ಒದಗಿಸಲಾಗುತ್ತಿದೆ.

ಜವಳಿ ವಲಯದ ಯೋಜನೆಗಳು:-

- ನೇಕಾರರ ಸಮ್ಮಾನ್ ಯೋಜನೆಯಡಿ ವಿದ್ಯುತ್‌ಮಗ್ಗ ನೇಕಾರರಿಗೆ ವಾರ್ಷಿಕ ರೂ.5,000/- ಗಳ ಆರ್ಥಿಕ ನೆರವು ನೀಡುವುದು.
- ನೇಕಾರರ ಮಕ್ಕಳಿಗೆ ವಿದ್ಯಾರ್ಥಿ ವೇತನ
- 02 ವಿದ್ಯುತ್ ಮಗ್ಗ ಖರೀದಿಗೆ ಸಹಾಯಧನ.
- ಎಲೆಕ್ಟ್ರಾನಿಕ್ ಜಕಾರ್ಡ್ ಖರೀದಿಗೆ ಸಹಾಯಧನ
- ವಿದ್ಯುತ್ ರಿಯಾಯಿತಿ ಸಹಾಯಧನ – 01 ರಿಂದ 10 ಹೆಚ್.ಪಿ ವಿದ್ಯುತ್ ಸಂಪರ್ಕ ಪಡೆದ ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ ಘಟಕಗಳಿಗೆ ಉಚಿತವಾಗಿ ವಿದ್ಯುತ್ ಪೂರೈಸಿ ಶೂನ್ಯಬಿಲ್ ನೀಡಲಾಗುತ್ತಿದೆ ಹಾಗೂ 10.01 ರಿಂದ 20 ಹೆಚ್.ಪಿ ವಿದ್ಯುತ್ ಸಂಪರ್ಕ ಪಡೆದ ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ ಘಟಕಗಳಿಗೆ ಬಳಸಿದ ಒಟ್ಟು ಯೂನಿಟ್‌ಗಳಿಗೆ ಪ್ರತಿ ಯೂನಿಟ್‌ಗೆ ರೂ.1.25 ರಂತೆ ವಿದ್ಯುತ್ ಶುಲ್ಕವನ್ನು (Energy Charges) ಘಟಕದವರು ಪಾವತಿಸುವುದು. ಬಾಕಿ ಉಳಿಯುವ ವಿದ್ಯುತ್ ಶುಲ್ಕದ ಮೊತ್ತವನ್ನು ಮಾತ್ರ ಸರ್ಕಾರದ ಬೊಕ್ಕಸದಿಂದ ಭರಿಸಲಾಗುತ್ತಿದೆ.

| | | |
|---|---|---|
| | | • ಸೈಜಿಂಗ್ ಘಟಕ ಸ್ಥಾಪನೆಗೆ ಸಹಾಯಧನ<br>• ಮಿನಿ ಪವರ್‌ಲೂಮ್ ಪಾರ್ಕ್ ಸ್ಥಾಪನೆಗೆ ಸಹಾಯಧನ<br>• ಪ್ರೊಸೆಸ್ಸಿಂಗ್ ಘಟಕ ಸ್ಥಾಪನೆಗೆ ಸಹಾಯಧನ<br>• 20 ಹೆಚ್.ಪಿಇಂದ 200 ಹೆಚ್.ಪಿವರೆಗಿನವಿದ್ಯುತ್ ಸಂಪರ್ಕ ಹೊಂದಿರುವ SCSP / TSP ವಿದ್ಯುತ್ ಮಗ್ಗ ಘಟಕಗಳಿಗೆ Energy Charges ನಲ್ಲಿ ಶೇ.50 ರಷ್ಟು ವಿದ್ಯುತ್ ಸಹಾಯಧನ ಒದಗಿಸಲಾಗುವುದು.<br>• ಎಸ್.ಸಿ.ಎಸ್.ಪಿ/ಟಿ.ಎಸ್.ಪಿರಡಿ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿ ಸಣ್ಣ (ಎಸ್.ಎಂ.ಇ) ಘಟಕಗಳ ಸ್ಥಾಪನೆಗೆ ಸಹಾಯಧನ. |
| ಈ) | ಹತ್ತಿ ಮತ್ತು ಮಾನವ ನಿರ್ಮಿತನಾರುಗಳು (Man Made Fibers - MMF) ಕೊರತೆಯನ್ನು ಮತ್ತು ಕಚ್ಚಾವಸ್ತುಗಳ ಮೇಲಿನ ಹೆಚ್ಚಿನ ಬೆಲೆ ನೀಗಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು; ಪೂರೈಕೆ ಸರಪಳಿಯನ್ನು ಸುಧಾರಿಸಲು ಮತ್ತು ಜವಳಿ ಕ್ಷೇತ್ರದಲ್ಲಿ ಬೆಲೆ ಏರಿಳಿತಗಳನ್ನು ನಿರ್ವಹಿಸಲು, ವಿಶೇಷವಾಗಿ MMFಗೆ ಸಂಬಂಧಿಸಿದಂತೆ ಯಾವ ಕ್ರಮಗಳನ್ನು ಜಾರಿಗೆತರಲಾಗುತ್ತಿದೆ? | ರಾಷ್ಟ್ರೀಯ ಕೈಮಗ್ಗ ಅಭಿವೃದ್ಧಿ ನಿಗಮದ ಮುಖಾಂತರ ಕೈಮಗ್ಗ ನೇಕಾರರ ಸಹಕಾರ ಸಂಘಗಳು ಖರೀದಿಸುವ ರೇಷ್ಮೆ / ಹತ್ತಿ / ಉಣ್ಣೆ ಕಚ್ಚಾ ನೂಲಿಗೆ ಪ್ರತಿ ಕೆ.ಜಿಗೆ ರೂ.15/- ರಂತೆ ರಾಜ್ಯ ಸರ್ಕಾರದ ಸಹಾಯಧನ ನೀಡಲಾಗುವುದು. |

ಸಂಖ್ಯೆ: **CI 283 JAKE 2025**

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು